ಸಂಪುಟ : 8 ಸಂಚಿಕೆ : 280 ಪುಟ : 4 ಬೆಲೆ : 3.00 ರವಿವಾರ ಡಿಸೆಂಬರ್ 17, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 280 Pages : 4 Price : 3.00 Sunday December 17, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 17 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 28 ರಲ್ಲಿ ಪಂಚಾಕ್ಷರಿನಗರ 4ನೇ ಕ್ರಾಸ್, ನಾಗಪ್ಪನ ಕಟ್ಟಿ ಲೈನ್, ವಾರ್ಡ್ ನಂ. 22ರಲ್ಲಿ ಗಂಗಿಮಡಿ ರಸ್ತೆ ಶುದ್ಧ ನೀರಿನ ಘಟಕ ಭಾಗ-1, 2, 3, 4, 5, ಈಶ್ವರ್ ಗುಡಿ ಲೈನ್, ವಾರ್ಡ್ ನಂ 24 ಹಾಗೂ 35ರಲ್ಲಿ ಒಂದನೇ ಕ್ರಾಸ್ ದೊಡ್ಡಮನಿ ಲೈನ್, ಸಿದ್ದು ಪಾಟೀಲ್ ಅವರ ಲೈನ್, ನೀಲಮ್ಮ ತಾಯಿ ಮಠದ ಲೈನ್, ಈಡಬ್ಲ್ಯೂಎಸ್ ಆದರ್ಶ ನಗರ, ಈಶ್ವರಗುಡಿ ಲೈನ್ ಮೂರನೇ ಕ್ರಾಸ್, ಸಚ್ಚಿದಾನಂದ ಮಠದ ಎರಡನೇ ಕ್ರಾಸ್, ಮಸೂತಿ ಲೈನ್, ವಾರ್ಡ್ ನಂ. 5, 6, 10ರಲ್ಲಿ ಸಿಹಿ ನೀರಿನ ಬಾವಿ, ಮಸೂತಿ ಲೈನ್, ಮುಳಗುಂದ ಅವರ ಲೈನ್, ಮಲ್ಲಿಕಾರ್ಜುನ್ ಗುಡಿ ಲೈನ್, ಗಣಾಚಾರಿ ಲೈನ್, ಕಮ್ಮಾರ್ ಲೈನ್, ಕಲ್ಮನಿಯವರ ಲೈನ್, ದೇವದರ್ ಅವರ ಲೈನ್, ಕಬಾಡಿ ಲೈನ್, ಮ್ಯಾಗೇರಿಯವರ ಲೈನ್, ವಾರ್ಡ್ ನಂ. 15, 16 ರಲ್ಲಿ ಶಹಾಪುರ್ ಪೇಟೆ, ಜವಳಗಲ್ಲಿ ಮೀನಿನ ಮಾರ್ಕೆಟ್, ಡಿ.ಸಿ.ಎಂ.ಎಲ್. ರಸ್ತೆ, ಗಣೇಶ ಗುಡಿ ಲೈನ್, ಬಸವೇಶ್ವರ ಗುಡಿ ಲೈನ್, ಮಹೇಂದ್ರಕರ್ ಸರ್ಕಲ್ ಲೈನ್, ಗಾಂಧಿ ಸರ್ಕಲ್ ಲೈನ್, ಅಂಗನವಾಡಿ ಲೈನ್ ಕೆಲವು ಭಾಗಗಳು

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಶರಣ ಸಂಗಮ' ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಡಿ.17ರ ಬೆಳಿಗ್ಗೆ 11 ಕ್ಕೆ ನಡೆಯಲಿರುವ ಬಸವದಳದ 1572ನೇ ಶರಣ ಸಂಗಮದಲ್ಲಿ 'ಲಿಂಗಾಯತ ಧರ್ಮದ ಸಂಸ್ಕಾರಗಳು' ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣೆ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ಮಾಡುವರು. ಅತಿಥಿಗಳಾಗಿ ಶರಣ ಬಸವರಾಜ ವೆಂಕಟಾಪೂರ ಶರಣರು ಆಗಮಿಸುವರು. ಶರಣೆ ಜ್ಯೋತಿ, ಶರಣ ಮಂಜುನಾಥ ಅಸುಂಡಿ ಉಪಸ್ಥಿತರಿರುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಲೀಡ್ ಬ್ಯಾಂಕ್‌ನ ಡಿಎಲ್‌ಆರ್‌ಸಿ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚನೆ

# ಸೌಜನ್ಯಯುತ ಬ್ಯಾಂಕ್ ಸೇವೆಗೆ ಮುಂದಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ರೈತರಿಗೆ ನೀಡುವ ವಿಮಾ ಮೊತ್ತ, ಪರಿಹಾರ ಧನದ ಮೊತ್ತವನ್ನು ಸಾಲಕ್ಕೆ ಹೊಂದಾಣಿಕೆ ಮಾಡಬಾರದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಗದಗ ಜಿಲ್ಲಾಡಳಿತ ಭವನದ ಆವರಣದಲ್ಲಿ ಶನಿವಾರ ಜರುಗಿದ ಲೀಡ್ ಬ್ಯಾಂಕ್‌ನ ಡಿಎಲ್‌ಆರ್‌ಸಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರೈತರ ಸಮಸ್ಯೆಗಳಿಗೆ ಸ್ಪಂದಿಸಿ ಅವರಿಗೆ ಸರಿಯಾದ ಮಾರ್ಗದರ್ಶನ ನೀಡಿ. ಸಹಾಯಧನ, ಸಾಲ ಸೌಲಭ್ಯ ಮಂಜೂರಾತಿಯಲ್ಲಿ ಅರ್ಹ ಬ್ಯಾಂಕ್ ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸಬೇಕು.

ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಬ್ಯಾಂಕ್ ಅಧಿಕಾರಿಗಳ ಪಾತ್ರ ಮುಖ್ಯವಾಗಿದೆ. ಬ್ಯಾಂಕ್‌ಗಳಲ್ಲಿ ಹಿರಿಯ ನಾಗರಿಕರಿಗೆ ಹಾಗೂ ವಿಕಲಚೇತನರಿಗೆ ಮಾನವೀಯ ದೃಷ್ಟಿಯಿಂದ ಸೌಜನ್ಯಯುತ ನಡುವಳಿಕೆಗಳ ಮೂಲಕ ಬ್ಯಾಂಕ್ ಸೇವೆ ಒದಗಿಸಲು ಮುಂದಾಗಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಲೀಡ್ ಬ್ಯಾಂಕ್‌ನ ವ್ಯವಸ್ಥಾಪಕ ಜಬ್ಬಾರ್ ಅಹ್ಮದ ಮಾತನಾಡಿ, ಜಿಲ್ಲೆಯ ಸಾಲ ಠೇವಣಿ ಅನುಪಾತ ಸೆಪ್ಟೆಂಬರ್ 31ರವರೆಗೆ ಶೇ. 98.30 ಆಗಿದೆ. ಎಲ್ಲ ಬ್ಯಾಂಕುಗಳ ನಿಯಂತ್ರಣಾಧಿಕಾರಿಗಳು ಶಾಖೆವಾರು ಸಾಲ ಠೇವಣಿ ಅನುಪಾತವನ್ನು ಕೂಲಂಕುಷವಾಗಿ ಪರಿಶೀಲಿಸಿ, ಅನುಪಾತವನ್ನು ಸುಧಾರಿಸಲು ಶಾಖೆಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಸೆಪ್ಟೆಂಬರ್ 2023ರ ಅಂತ್ಯದವರೆಗೆ ಒಟ್ಟು ಆದ್ಯತಾ ವಲಯಕ್ಕೆ ಶೇ. 43.35ರಷ್ಟು ಸಾಲ ನೀಡಿಕೆಯಲ್ಲಿ ಗುರಿ ಸಾಧಿಸಿದೆ. ಗದಗ ತಾಲೂಕಿನ ವ್ಯಾಪ್ತಿಯಲ್ಲಿ ಶೇ. 36.96, ಗಜೇಂದ್ರಗಡ ತಾಲೂಕು ವ್ಯಾಪ್ತಿಯಲ್ಲಿ ಶೇ. 51.94, ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಯಲ್ಲಿ ಶೇ. 55.14, ಮುಂಡರಗಿ ತಾಲೂಕು ವ್ಯಾಪ್ತಿಯಲ್ಲಿ ಶೇ. 45.63, ನರಗುಂದ ತಾಲೂಕು ವ್ಯಾಪ್ತಿಯಲ್ಲಿ ಶೇ. 69.85, ರೋಣ ತಾಲೂಕಿನಲ್ಲಿ ಶೇ. 38.69 ಹಾಗೂ ಶಿರಹಟ್ಟಿ ತಾಲೂಕು ವ್ಯಾಪ್ತಿಯಲ್ಲಿ ಶೇ. 54.81ರಷ್ಟು ಗುರಿ ಸಾಧಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಕೇಂದ್ರ ಪುರಸ್ಕೃತ ಯೋಜನೆಗಳಾದ ಪ್ರಧಾನಮಂತ್ರಿ ಜನಧನ ಯೋಜನೆ, ಸಾಮಾಜಿಕ ಭದ್ರತಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ ಮುಂತಾದವುಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಇದೇ ಸಂದರ್ಭದಲ್ಲಿ ಗದಗ ಜಿಲ್ಲೆಯ ಎಸಿಪಿ (ಂಟಿಟಿಣಚಿಟ ಅಡಿಜಜಡಿಣ ಠಿಟಚಿಟ ) ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಸೇರಿದಂತೆ ವಿವಿಧ ಬ್ಯಾಂಕ್‌ಗಳ ನಿಯಂತ್ರಣಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



ಜಿಲ್ಲೆಯಲ್ಲಿ ಮುದ್ರಾ ಸಾಲ ಯೋಜನೆಯ ಶಿಶು ಯೋಜನೆಯಡಿಯಲ್ಲಿ 22849 ಅರ್ಜಿಗಳನ್ನು ಸ್ವೀಕರಿಸಿ, 5651.52 ಲಕ್ಷ ರೂ., ಕಿಶೋರ ಯೋಜನೆಯಡಿ 22838 ಅರ್ಜಿಗಳನ್ನು ಸ್ವೀಕರಿಸಿ 26109.17 ಲಕ್ಷ ರೂ. ಹಾಗೂ ತರುಣ ಯೋಜನೆಯಡಿ 1793 ಅರ್ಜಿಗಳನ್ನು ಸ್ವೀಕರಿಸಿ 11802.11 ಲಕ್ಷ ರೂ. ಹೀಗೆ ಒಟ್ಟು 47120 ಅರ್ಜಿಗಳನ್ನು ಸ್ವೀಕರಿಸಿ, 43562.80 ಲಕ್ಷ ರೂ. ವಿತರಣೆಯಾಗಿದೆ. ಉದ್ಯೋಗಿನಿ ಯೋಜನೆಯಡಿ 20 ಅರ್ಜಿಗಳಿಗೆ ಮಂಜೂರಾತಿ ನೀಡಲಾಗಿದೆ ಎಂದು ಜಬ್ಬಾರ್ ಅಹ್ಮದ ಸಭೆಗೆ ಮಾಹಿತಿ ನೀಡಿದರು.



## ಸಾಕ್ಷಿ ಸುಭಾಷಿತ

ನಾಯಕನಾಗಿ ಬಾಳು; ಅದಕ್ಕಾಗಿ ಜೀವನದಲ್ಲಿ ಹೆದರಿಕೆಯನ್ನು ಬಿಡು

–ಸ್ವಾಮಿ ವಿವೇಕಾನಂದ

## ಸಂಪಾದಕೀಯ

### ಕೋವಿಡ್ ಮುನ್ನೆಚ್ಚರಿಕೆ ಅತ್ಯವಶ್ಯಕ

ಜಗತ್ತಿನಾದ್ಯಂತ ಸಾವು ನೋವುಗಳಿಗೆ ಕಾರಣವಾಗಿ ಸಂಚಲನವನ್ನೇ ಸೃಷ್ಟಿಸಿದ್ದ ಕೋವಿಡ್ ಸೋಂಕು ಮತ್ತೊಮ್ಮೆ ಭೀತಿಯನ್ನ ಸೃಷ್ಟಿಸುತ್ತಿದೆ. ನೆರೆಯ ಕೇರಳ ರಾಜ್ಯದಲ್ಲಿ ಸೋಂಕು ವ್ಯಾಪಿಸುತ್ತಿರುವುದು ಕರ್ನಾಟಕದಲ್ಲಿಯೂ ಆತಂಕ ಮನೆ ಮಾಡಿದೆ.

ಕೇರಳದಲ್ಲಿ ಕಂಡು ಬಂದಿರುವ ಕೋವಿಡ್ ಸೋಂಕು ಗಂಭೀರವಾಗಿ ಇಲ್ಲದಿದ್ದರೂ, ಸೋಂಕಿತರ ಸಂಖ್ಯೆ ದಿನೇ ದಿನೇ ಏರಿಕೆಯಾಗುತ್ತಿದೆ. ಜೊತೆಗೆ ಕೋವಿಡ್ ರೂಪಾಂತರ ಸೋಂಕು ಕಾಣಿಸಿಕೊಂಡಿರುವುದನ್ನು ಆರೋಗ್ಯ ಇಲಾಖೆ ದೃಢಪಡಿಸಿದೆ.

ನೆರೆ ರಾಜ್ಯದಲ್ಲಿ ಸೋಂಕು ವ್ಯಾಪಿಸುತ್ತಿರುವುದನ್ನು ಕರ್ನಾಟಕ ಗಂಭೀರವಾಗಿ ಪರಿಗಣಿಸಬೇಕಾಗಿದೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು, ಕೇರಳದಲ್ಲಿನ ಸೋಂಕಿನ ಮೇಲೆ ನಿಗಾ ವಹಿಸಲಾಗುತ್ತಿದೆ. ರಾಜ್ಯದಲ್ಲಿ ಆತಂಕ ಪಡುವ ಅಗತ್ಯವಿಲ್ಲ. ಸೋಂಕಿನ ಪ್ರದೇಶದಿಂದ ಬರುವವರನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ ಎನ್ನುವ ಸ್ಪಷ್ಟನೆ ನೀಡಿದ್ದಾರೆ.

ಕೋವಿಡ್ ಸೋಂಕಿನ ಬಗ್ಗೆ ಆತಂಕ ಪಡಬೇಕಾಗಿಲ್ಲ ನಿಜ. ಆದರೆ ಎಚ್ಚರಿಕೆಯನ್ನ ವಹಿಸುವುದು ಅತ್ಯಗತ್ಯವಾಗಿದೆ. ವೃದ್ಧರು ಮಕ್ಕಳು ಸಣ್ಣಪುಟ್ಟ ಸೋಂಕಿಗೂ ದೊಡ್ಡ ದೊಡ್ಡ ಆರೋಗ್ಯ ಸಂಬಂಧಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಆ ಕಾರಣಕ್ಕಾದರೂ ಸೋಂಕು ವ್ಯಾಪಿಸದಂತೆ ಮುನ್ನೆಚ್ಚರಿಕೆಗಳನ್ನ ವಹಿಸುವುದು ಸೂಕ್ತವಾಗುತ್ತದೆ.

ಕೇರಳದಲ್ಲಿ ಕೋವಿಡ್ ಲಕ್ಷಣಗಳು ಗಂಭೀರವಾಗಿಲ್ಲ. ಒಂದೊಮ್ಮೆ ಕರ್ನಾಟಕದಲ್ಲಿ ಸೋಂಕು ವ್ಯಾಪಿಸಿದರೆ, ಅದರ ಪರಿಣಾಮ ವ್ಯತಿರಿಕ್ತವಾಗಿದ್ದರೆ ಬಹುದೊಡ್ಡ ಸಮಸ್ಯೆ ಎದುರಿಸಬೇಕಾಗುತ್ತದೆ. ಕೇರಳದ ಜನಸಂಖ್ಯೆ ಮತ್ತು ಜನಸಾಂದ್ರತೆ, ಅಲ್ಲಿನ ವಾತಾವರಣ ಕರ್ನಾಟಕಕ್ಕಿಂತ ಸಾಕಷ್ಟು ಭಿನ್ನವಾಗಿದೆ.

ಹೀಗೆಲ್ಲಾ ಅಂಶಗಳನ್ನು ಪರಿಗಣಿಸಿ ಸಾಕಷ್ಟು ಮುನ್ನೆಚ್ಚರಿಕೆಗೆ ಆರೋಗ್ಯ ಇಲಾಖೆ ಮುಂದಾಗಬೇಕು. ಜನರಿಗೆ ಸೋಂಕಿನ ಬಗ್ಗೆ ಭಯ ಮೂಡಿಸುವುದಕ್ಕಿಂತ, ಮುನ್ನೆಚ್ಚರಿಕೆಯ ಸರಳ ಕ್ರಮಗಳ ಬಗ್ಗೆ ಹೆಚ್ಚು ಜಾಗೃತಿ ಮೂಡಿಸಬೇಕಾಗಿದೆ.

### ಇಂದು ಬಾಲಕಿಯರ ಬಾಲ ಮಂದಿರ ಲೋಕಾರ್ಪಣೆಗೊಳಿಸಲಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ

# ಬಾಲಕಿಯರ ಜೀವನದಲ್ಲಿ ಹೊಸ ಮನ್ವಂತರ






ಗದಗ ಜಿಲ್ಲೆ ಈಗಾಗಲೇ ಹಲವಾರು ಹೊಸ ಮೈಲಿಗಲ್ಲುಗಳನ್ನು ಸ್ಥಾಪಿಸಿ, ದೇಶವೇ ಇತ್ತ ತಿರುಗಿ ನೋಡುವಂತೆ ಹಲವಾರು ಕೆಲಸಗಳ ಮೂಲಕ ಗಮನ ಸೆಳೆಯುತ್ತಿದೆ. ಅದರ ಸಾಲಿಗೆ ಮತ್ತೊಂದು ಸೇರ್ಪಡೆ ಎನ್ನುವಂತೆ ಅತ್ಯಾಧುನಿಕ ಸೌಲಭ್ಯವುಳ್ಳ, ಸುಸಜ್ಜಿತ ಬಾಲಕಿಯರ ಬಾಲ ಮಂದಿರ ಲೋಕಾರ್ಪಣೆಗೊಳ್ಳುತ್ತಿದ್ದು, ಮುಖ್ಯಮಂತ್ರಿ ಸಿದ್ಧರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೇರಿದಂತೆ ಅನೇಕ ಗಣ್ಯರು ಈ ಕ್ಷಣಕ್ಕೆ ಸಾಕ್ಷಿಯಾಗಲಿದ್ದಾರೆ.

ಮಕ್ಕಳು ಸಮಾಜದ ಅಮೂಲ್ಯ ಆಸ್ತಿಯಾಗಿದ್ದು, ಅವರ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಸಕಾರಾತ್ಮಕ ಹಾಗೂ ಪೂರಕ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಗದಗ ನಗರದಲ್ಲಿ ನಿರ್ಮಾಣವಾಗಿರುವ ಬಾಲಕಿಯರ ಬಾಲ ಮಂದಿರ ವಿಶೇಷತೆಯನ್ನು ಹೊಂದಿದೆ. ಪ್ರತಿಯೊಂದು ಮಗುವನ್ನು ದೌರ್ಜನ್ಯ, ಹಿಂಸೆ, ಶೋಷಣೆಯಿಂದ ರಕ್ಷಿಸುವ ಹೊಣೆಯನ್ನು ಸರಕಾರಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದ ಸಮಗ್ರ ಮಕ್ಕಳ ರಕ್ಷಣಾ ಯೋಜನೆ-2011ರಲ್ಲಿ ಜಾರಿಗೆ ತಂದಿದ್ದು, ಅದು ವಿಶೇಷ ಮಹತ್ವವನ್ನು ಪಡೆದುಕೊಂಡಿದೆ.

ಇದೇ ಮಕ್ಕಳ ರಕ್ಷಣಾ ಯೋಜನೆಯಡಿಯಲ್ಲಿ ಗದಗ ಜಿಲ್ಲೆಯಲ್ಲಿ ಬಾಲಕಿಯರ ಸರಕಾರಿ ಬಾಲಮಂದಿರ ಕಟ್ಟಡ ನಿರ್ಮಾಣವಾಗಿದೆ. ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಒಟ್ಟು 199 ಲಕ್ಷ ರೂ.ಗಳ ಅನುದಾನ ಬಿಡುಗಡೆ ಮಾಡಲಾಗಿದ್ದು, ಜಿಲ್ಲಾ ನಿರ್ಮಿತಿ ಕೇಂದ್ರದ ಮೂಲಕ 2016-17ನೇ ಸಾಲಿಗೆ ಬಾಲಕಿಯರ ಸರಕಾರಿ ಬಾಲಮಂದಿರ ನಿರ್ಮಾಣದ ಜವಾಬ್ದಾರಿ ವಹಿಸಲಾಗಿತ್ತು. ಈ ಬಾಲಕಿಯರ ಸರಕಾರಿ ಬಾಲಮಂದಿರವು 100 ಮಕ್ಕಳ ಸಾಮರ್ಥ್ಯವುಳ್ಳ ಕಟ್ಟಡವಾಗಿದ್ದು, ಈಗ ಗದಗನಲ್ಲಿ 43 ಮಕ್ಕಳು ರಕ್ಷಣೆ ಮತ್ತು ಪೋಷಣೆಯನ್ನು ಪಡೆಯುತ್ತಿದ್ದಾರೆ.

ಹಿನ್ನೆಲೆ: ಸಮಗ್ರ ಮಕ್ಕಳ ರಕ್ಷಣಾ ಯೋಜನೆಯನ್ನು 1-4-2022ರ ಮಿಷನ್ ವಾತ್ಸಲ್ಯ ಎಂದು ಮರು ನಾಮಕರಣ ಮಾಡಿ ಯೋಜನೆಯನ್ನು ಜಾರಿಗೆ ತಂದಿದ್ದು, ಗದಗ ಜಿಲ್ಲೆಯಲ್ಲಿ ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳಾದ ಅನಾಥ, ನಿರ್ಗತಿಕ, ದೌರ್ಜನ್ಯ, ಹಿಂಸೆಗೆ ಒಳಪಟ್ಟ ಪ್ರಕೃತಿ ವಿಕೋಪಗಳಿಗೆ ಒಳಪಟ್ಟ ಮಕ್ಕಳು, ಕೌಟುಂಬಿಕ ಕಲಹದಿಂದ ಬೇರ್ಪಟ್ಟ ಮಕ್ಕಳು, ನಿರ್ಲಕ್ಷಕ್ಕೆ ಒಳಪಟ್ಟ ಮಕ್ಕಳು, ಖೈದಿ ಪಾಲಕರ ಮಕ್ಕಳು, ಭಿಕ್ಷಾಟನೆಯಿಂದ ರಕ್ಷಿಸಿದ ಮಕ್ಕಳು ಹಾಗೂ ಬಾಲ್ಯ ವಿವಾಹದಿಂದ ರಕ್ಷಿಸಿದ ಮಕ್ಕಳು ಹೀಗೆ ಇನ್ನಿತರೆ ಕಾರಣಾಂತರಗಳಿಂದ ಬಾಲಕಿಯರ ಸರಕಾರಿ ಬಾಲಮಂದಿರದಲ್ಲಿ ರಕ್ಷಣೆ ಮತ್ತು ಪೋಷಣೆಯನ್ನು ಪಡೆಯಬಹುದಾಗಿದೆ.



ದುರ್ಬಲ, ಅನಾಥ, ದೌರ್ಜನ್ಯಕ್ಕೆ ಒಳಗಾದ ಮಕ್ಕಳ ರಕ್ಷಣೆ ಜೊತೆಗೆ ಅವರ ಭವಿಷ್ಯ ಕಟ್ಟಿಕೊಡುವ ದೊಡ್ಡ ಜವಾಬ್ದಾರಿಯನ್ನು ಸರಕಾರ ತೆಗೆದುಕೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರಕಾರ ಈ ಜವಾಬ್ದಾರಿ ನಿರ್ವಹಣೆಯಲ್ಲಿ ಸಮಾಜದ ವಿಶೇಷ ಪಾಲ್ಗೊಳ್ಳುವಿಕೆ ಹಾಗೂ ಸಹಕಾರವನ್ನು ಬಯಸುತ್ತೇನೆ. ನಿರ್ಗತಿಕ, ತೊಂದರೆಯಲ್ಲಿರುವ ಮಕ್ಕಳ ಭವಿಷ್ಯವನ್ನು ಕಟ್ಟಿಕೊಡುವಲ್ಲಿ ಎಲ್ಲರೂ ಕೈಜೋಡಿಸಿ.

**– ಎಚ್.ಕೆ. ಪಾಟೀಲ.**
ಕಾನೂನು, ಪ್ರವಾಸೋದ್ಯಮ
ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ಆಸಕ್ತಿ ಹಾಗೂ ವಿಶೇಷ ಕಾಳಜಿಯಿಂದಾಗಿ ಜಿಲ್ಲೆಯಲ್ಲಿನ ಮಕ್ಕಳ ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳಾದ ಅನಾಥ, ನಿರ್ಗತಿಕ, ದೌರ್ಜನ್ಯ, ಹಿಂಸೆಗೆ ಒಳಪಟ್ಟ ಪ್ರಕೃತಿ ವಿಕೋಪಗಳಿಗೆ ಒಳಪಟ್ಟ ಮಕ್ಕಳು, ಕೌಟುಂಬಿಕ ಕಲಹದಿಂದ ಬೇರ್ಪಟ್ಟ ಮಕ್ಕಳು, ಹಾಗೂ ನಿರ್ಲಕ್ಷಕ್ಕೆ ಒಳಪಟ್ಟ ಮಕ್ಕಳು, ಖೈದಿ ಪಾಲಕರ ಮಕ್ಕಳು, ಭಿಕ್ಷಾಟನೆಯಿಂದ ರಕ್ಷಿಸಿದ ಮಕ್ಕಳು ಹಾಗೂ ಬಾಲ್ಯ ವಿವಾಹದಿಂದ ರಕ್ಷಿಸಿದ ಮಕ್ಕಳಿಗೆ ಸುಸಜ್ಜಿತ ಬಾಲಕಿಯರ ಬಾಲ ಮಂದಿರ ನಿರ್ಮಾಣಗೊಂಡಿದೆ.

ಇಂತಹ ಮಕ್ಕಳಿಗೆ ಉತ್ತಮವಾದ ವಾತಾವರಣವನ್ನು ಕಲ್ಪಿಸಿ ಅವರ ಸರ್ವತೋಮುಖ ಬೆಳವಣಿಗೆಗೆ ಸಹಕರಿಸಿ, ಇಂತಹ ಮಕ್ಕಳ ರಕ್ಷಣೆ ಹಾಗೂ ಪುನರ್ವಸತಿಯೇ ಇದರ ಮೂಲ ಉದ್ದೇಶವಾಗಿದೆ.

ಆಗಮಿಸುವ ಗಣ್ಯರು: ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಡಿ.17ರಂದು ಬೆಳಿಗ್ಗೆ 10.4ಕ್ಕೆ ನಗರದ ಸಂಭಾಪುರ ರಸ್ತೆಯ ಬಾಲಕಿಯರ ಸರಕಾರಿ ಬಾಲಮಂದಿರದ ಕಟ್ಟಡವನ್ನು ಮುಖ್ಯಮಂತ್ರಿ ಎಸ್.ಸಿದ್ಧರಾಮಯ್ಯನವರು ಉದ್ಘಾಟಿಸಲಿದ್ದಾರೆ. ವಿ.ಪ ಸಭಾಪತಿ ಬಸವರಾಜ ಹೊರಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು.

ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿ.ಪ ಸದಸ್ಯರಾದ ಸಲೀಂ ಅಹ್ಮದ್, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ. ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಶಾಸಕರಾದ ಸಿ.ಸಿ. ಪಾಟೀಲ, ಜಿ.ಎಸ್. ಪಾಟೀಲ, ಡಾ.ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಜಿ.ಸಿ. ಪ್ರಕಾಶ, ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕ ಚಂದ್ರಕಾಂತ ಎಮ್.ವಿ ವಿಶೇಷ ಆಹ್ವಾನಿತರಾಗಿ ಆಗಮಿಸುವರು.



## ದುಬೈ ಬಸವ ಸಮಿತಿ ವತಿಯಿಂದ ಬಸವರಾಜ್ ಹೊರಟ್ಟಿಯವರಿಗೆ ಸನ್ಮಾನ



**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಇತ್ತೀಚೆಗೆ ದುಬೈನಲ್ಲಿ ನಡೆದ ಗಡಿನಾಡು ಉತ್ಸವ ಕಾರ್ಯಕ್ರಮ ಉದ್ಘಾಟಿಸಲು ತೆರಳಿದ್ದ ಸಭಾಪತಿ ಬಸವರಾಜ್ ಹೊರಟ್ಟಿ ಅವರಿಗೆ ದುಬೈ ಬಸವ ಬಳಗದ ಸಮಿತಿ ವತಿಯಿಂದ ಗೌರವಿಸಿ ಸನ್ಮಾನಿಸಿದರು.

ಸಮಿತಿಯ ಅಧ್ಯಕ್ಷ ಡಾ. ಬಸವರಾಜ್ ಹಾನಗಲ್ ಮಾತನಾಡಿ, ಬಸವರಾಜ್ ಹೊರಟ್ಟಿಯವರು ಬಸವ ತತ್ವಗಳನ್ನು ತಮ್ಮ ಜೀವನದಕ್ಕೂ ಪಾಲಿಸಿಕೊಂಡು ಬಂದ ಅಪರೂಪದ ಜನನಾಯಕ. ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಕಳೆದ ನಾಲ್ಕು ದಶಕಗಳಿಂದ ಸಾರ್ವಜನಿಕ ಜೀವನದಲ್ಲಿದ್ದ ಹೊರಟ್ಟಿಯವರು ಇತರೆ ಜನಪ್ರತಿನಿಧಿಗಳಿಗೆ ಮಾದರಿ. ಅವರ ಸಮಾಜಮುಖಿ ಕಾರ್ಯಗಳನ್ನು ಸಮಾಜ ಎಂದೂ ಮರೆಯದು. ಸಮಾಜದ ಹಾಗೂ ಹುಟ್ಟೂರಿನ ಋಣ ತೀರಿಸಿದ ನಾಡಿನ ಏಕೈಕ ನಂಬುಗೆಯ ನಾಯಕರಾಗಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಬಸವರಾಜ್ ಹೊರಟ್ಟಿ, ನನ್ನ ಜೀವನದಲ್ಲಿ ಲಕ್ಷಾಂತರ ಸನ್ಮಾನಗಳು ಗೌರವಗಳು ಸಿಕ್ಕಿವೆ. ಆದರೆ ದುಬೈ ಬಸವ ಬಳಗದ ವತಿಯಿಂದ ನೀಡಿದ ಗೌರವ ಸದಾ ಸ್ಮರಣೀಯ. ಸಾಗರದಾಚೆಗೆ ಕನ್ನಡದ ಕಂಪು ಹರಡುತ್ತಿರು ಇಲ್ಲಿನ ಕನ್ನಡಿಗರ ಕನ್ನಡ ಅಭಿಮಾನಕ್ಕೆ ಬೆಲೆ ಕಟ್ಟಲಾಗದು.

ಕರ್ನಾಟಕದ ಸಂಸ್ಕೃತಿಯನ್ನು ದುಬೈಯಲ್ಲಿ ಬಿತ್ತರಿಸುವ ಮೂಲಕ ಇಲ್ಲಿನ ವಾತಾವರಣವನ್ನು ಕನ್ನಡಮಯ ಮಾಡಿದ್ದು ಅತ್ಯಂತ ಖುಷಿಯ ಸಂಗತಿ. ಎಂದರು.

ಈ ಸಂದರ್ಭದಲ್ಲಿ ಬೆಂಗಳೂರಿನ ನವೀನ ಗೌಡ ಸೇರಿದಂತೆ ದುಬೈ ಬಸವ ಬಳಗದವರು ಉಪಸ್ಥಿತರಿದ್ದರು.

## ಬೂದುಗುಂಪ ಶಾಲೆಯಲ್ಲಿ ಉಚಿತ ಆರೋಗ್ಯ ಶಿಬಿರ



**■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ತಾಲೂಕಿನ ಬೂದುಗುಂಪ ಗ್ರಾಮದಲ್ಲಿ ಶನಿವಾರ ಶ್ರೀ ಕರಿಯಮ್ಮ ದೇವಿ ಶಿಕ್ಷಣ ಸಂಸ್ಥೆ ಅಡಿಯಲ್ಲಿ ಸ್ಥಾಪಿತವಾದ ಡಾ.ರಾಧಾಕೃಷ್ಣನ್ ಪಬ್ಲಿಕ್ ಸ್ಕೂಲ್ ಬೂದುಗುಂಪ ಶಾಲೆಯಲ್ಲಿ ಕೊಪ್ಪಳದ ಸೆಕ್ಯೂರ್ ಆಸ್ಪತ್ರೆ ಹಾಗೂ ಖುಷಿ ಫೌಂಡೇಶನ್ ಸಹಯೋಗದಲ್ಲಿ ಒಂದು ದಿನದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಶಾಲೆಯ ಮುಖ್ಯಸ್ಥ ಮಧುಸೂದನ್ ಡೊಳ್ಳಿನ ಮಾತನಾಡಿ, ಇಂತಹ ಶಿಬಿರಗಳು ಹೆಚ್ಚು ನಡೆಯಬೇಕು ಮತ್ತು ಜನರು ಇದರ ಉಪಯೋಗಗಳನ್ನು ಪಡೆದುಕೊಳ್ಳಬೇಕು.

ಶಾಲೆಗಳು ಶಿಕ್ಷಣದೊಂದಿಗೆ ಸಮಾಜದಲ್ಲಿ ಹಾಗೂ ಮಕ್ಕಳಲ್ಲಿ ಆರೋಗ್ಯ ಕಾಪಾಡಿಕೊಳ್ಳುವಂತೆ ಜಾಗೃತಿ ಮೂಡಿಸುವದಲ್ಲದೆ ಇಂತಹ ಉಚಿತ ಶಿಬಿರಗಳನ್ನು ನಡೆಸುವುದು ಮುಖ್ಯವಾಗಿದೆ ಎಂದರು.

ರಾಧಾಕೃಷ್ಣ ಪಬ್ಲಿಕ್ ಶಾಲೆ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತ ಬಂದಿದೆ. ಮುಂದೆಯೂ ಕೂಡ ಅನೇಕ ಕಾರ್ಯಕ್ರಮಗಳನ್ನು ಮಾಡುವ ಆಸಕ್ತಿ ಈ ಶಾಲೆಯ ಮುಖ್ಯಸ್ಥರಿಗೆ, ಶಿಕ್ಷಕ ಹಾಗೂ ಸಿಬ್ಬಂದಿ ವರ್ಗಕ್ಕಿದೆ ಎಂದು ಸರ್ಕಾರಿ ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಗೋವಿಂದರಾಜ್ ಬೂದಗುಂಪ ಶ್ಲಾಘಿಸಿದರು.

ಶಿಬಿರದಲ್ಲಿ ಮಕ್ಕಳಿಗೆ ಹಾಗೂ ಸಾರ್ವಜನಿಕರಿಗೆ ಅಗತ್ಯ ಔಷಧಿಗಳನ್ನು ಉಚಿತವಾಗಿ ವಿತರಿಸಲಾಯಿತು.

### ಕಾನೂನು ಪಾಲಿಸದ ಅಧಿಕಾರಿಗಳ ವಿರುದ್ಧ ಬೀದಿ ಬದಿ ವ್ಯಾಪಾರಿಗಳ ಪ್ರತಿಭಟನೆ

# ಬೀದಿ ವ್ಯಾಪಾರಿಗಳಿಗೆ ಅನ್ಯಾಯವಾಗುತ್ತಿದೆ

**■ ವಿಜಯಸಾಕ್ಷಿ ಸುದ್ದಿ, ಗದಗ**




2019ರಿಂದ 2023ರವರೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನ ಹಾಗೂ ಯೋಜನೆಗಳನ್ನು ಅನುಷ್ಠಾನಗೊಳಿಸದೆ ಅಧಿಕಾರದ ದುರ್ಬಳಕೆ ಮಾಡಿಕೊಂಡು ಕಾಯ್ದೆ ಉಲ್ಲಂಘನೆ ಮಾಡಿದ್ದು, 9 ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳನ್ನು ಅಮಾನತು ಮಾಡಬೇಕೆಂದು ಭಾಷಾಸಾಬ ಮಲ್ಲಸಮುದ್ರ ಒತ್ತಾಯಿಸಿದರು.

ಈ ಕುರಿತು ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಮುಖ್ಯ ಅಧಿಕಾರಿಯನ್ನು ಅಮಾನತು ಮಾಡಬೇಕು. ಇತ್ತೀಚಿನ ಅಧಿಕಾರಿಗಳು ಗದಗ ಜಿಲ್ಲೆಗೆ ಬಂದ ಅನುದಾನದಲ್ಲಿ ಕೇವಲ ಟೆಂಡರ್ ರೂಪದ ಹಣವನ್ನಷ್ಟೇ ಬಳಕೆ ಮಾಡಿ ಬೀದಿ ವ್ಯಾಪಾರಿಗಳ ಅಭಿವೃದ್ಧಿಗೆ ಕಲ್ಲು ಹಾಕಿದ್ದಾರೆ. ಅಲ್ಲದೇ ಕಾನೂನು ಪಾಲಿಸದ ಅಧಿಕಾರಿಗಳು ಏನೂ ಆಗಿಲ್ಲವೆಂಬಂತಿದ್ದಾರೆ.

ಬೀದಿ ವ್ಯಾಪಾರಿಗಳಿಗೆ ಮಾಡಿದ ದ್ರೋಹ ಇದಾಗಿದೆ. ಕಾರಣ ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿಗಳ ಪ್ರತಿಕೃತಿ ದಹನ ಮಾಡಿ ಸಾವಿರಾರು ಸಂಖ್ಯೆಯಲ್ಲಿ ಬೀದಿ ವ್ಯಾಪಾರಿಗಳು ಪ್ರತಿಭಟನೆ ಮಾಡಲಿದ್ದಾರೆ ಎಂದರು.

ಗದಗ ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳು ಹಾಗೂ ಕೌಶಲ್ಯ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳ ಬೀದಿ ವ್ಯಾಪಾರಿಗಳ ಕೌಶಲ್ಯ ಅಭಿವೃದ್ಧಿ ಅಧಿಕಾರಿಗಳ ಜೀವನೋಪಾಯ ನಿಯಂತ್ರಣ ಕಾಯ್ದೆ 2014ರ ಪ್ರಕಾರ ಕರ್ನಾಟಕ ಸರ್ಕಾರ 2019ರಲ್ಲಿ ಅಧಿಸೂಚನೆ ಹೊರಡಿಸಿದ್ದು, ರಾಜ್ಯದ ಎಲ್ಲಾ ಸ್ಥಳಿಯ ಸಂಸ್ಥೆಗಳಿಗೆ ಬೀದಿ ವ್ಯಾಪಾರಿಗಳ ಕಾನೂನು ಪಾಲಿಸಲು ಸ್ಪಷ್ಟ ನಿರ್ದೇಶನ ನೀಡಿದೆ ಎಂದು ಭಾಷಾಸಾಬ ಮಲ್ಲಸಮುದ್ರ ತಿಳಿಸಿದರು.

ಹೋರಾಟದ ನೇತೃತ್ವವನ್ನು ಗದಗ ಜಿಲ್ಲಾಧ್ಯಕ್ಷ ಮಕ್ತುಮಸಾಬ ನಾಲಬಂದ, ಮುಖಂಡರಾದ ಶಿವಾಜಿ ಮಧುರಕರ, ಮಂಜುನಾಥ ಹೊಗೆಸೊಪ್ಪಿನ, ರಫೀಕ ಹುಂಡಿ, ಮಹಮ್ಮದ ಕಾತರಕಿ, ಹನಮಂತ, ಶಿವಾನಂದ, ಶೈನಾಜ, ಕಳಕಪ್ಪ ಪೋತಾ, ಶಬ್ಬಿರ ನಗಾರಿ, ಆನಂದ, ಭೀಮಣ್ಣ ಕೋಳಿ, ಬಸವರಾಜ ತಾವರೆ, ವಿಕಾಸ, ರಶೀದಾ ನದಾಫ, ರೇಣುಕಾ ಹತ್ತಿವಾಲೆ, ರಾಮವ್ವ, ಲಕ್ಷ್ಮೀ, ಫಯಾಜ ನಾರಾಣಕೇರಿ, ನಿಂಗನಗೌಡ, ಮಾಬುಸಾಬ ಮುಳುಗುಂದ, ಜಹಾಂಗೀರಹ್ಮದ ಮುಳುಗುಂದ, ಅಬ್ಬು ರಾಟಿ, ಭಾಷಾಸಾಬ ಮಲ್ಲಸಮುದ್ರ, ಮಾರುತಿ ಸೋಳಂಕೆ, ಮಹಮ್ಮದಅಲಿ ಅತ್ತಾರ, ಮಾಬುಲಿ ಧಾರವಾಡ, ಕುತಿಜಾ ದೊಡ್ಡಮನಿ, ತಬರೇಜ್ ಪಠಾಣ, ಯೂಸೂಫ ಶಿರಹಟ್ಟಿ, ರಾಜು ರೋಣದ, ದಾದು ಮುಂಡರಗಿ, ನವೀನ ಬಂಢಾರಿ ಸೇರಿದಂತೆ ಎಲ್ಲಾ ತಾಲೂಕುಗಳ ಮುಖಂಡರ ಸಂಯೋಗದಲ್ಲಿ ಹೋರಾಟ ನಡೆಸಲಾಗುವುದು ಎಂದರು.

# ದಾನದಿಂದ ಪುಣ್ಯ ಫಲಗಳ ವೃದ್ಧಿ

**■ ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ಶಹರದ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಗೆ ಯುವ ಉದ್ಯಮಿ ಸುನೀಲ ವೆರ್ಣೆಕರ್ ಅವರು ತಮ್ಮ ತಂದೆಯವರಾದ ದಿ. ಗಂಗಾಧರ ವಿಠೋಬಾ ವೆರ್ಣೆಕರ್ ಸ್ಮರಣಾರ್ಥ ಸ್ವಚ್ಛತಾ ಪರಿಕರಗಳನ್ನು ದೇಣಿಗೆ ನೀಡಿರುವುದು ಶ್ಲಾಘನೀಯ ಕಾರ್ಯ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ ಹೇಳಿದರು.

ಅವರು ಸ್ಥಳೀಯ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಗೆ ದಿ. ಗಂಗಾಧರ ವಿಠೋಬಾ ವೆರ್ಣೆಕರ್ ಕುಟುಂಬವರ್ಗದವರು ಕೊಡಮಾಡಿದ ಸ್ವಚ್ಛತಾ ಪರಿಕರಗಳನ್ನು ವಿತರಿಸುವ ಕಾರ್ಯಕ್ರಮದಲ್ಲಿ ದಾನಿಗಳಾದ ಸುನೀಲ ವೆರ್ಣೆಕರ್ ಅವರನ್ನು ಸನ್ಮಾನಿಸಿ ಮಾತನಾಡಿದರು.

ದಾನ ನೀಡುವುದು ಎಲ್ಲ ಧರ್ಮಗಳಲ್ಲೂ ಅತ್ಯಂತ ಪುಣ್ಯದ ಕೆಲಸವೆಂದು ಪರಿಗಣಿಸಲಾಗಿದೆ. ದಾನ ಮಾಡುವುದರಿಂದ ಪುಣ್ಯ ಫಲಗಳು ವೃದ್ಧಿಯಾಗುತ್ತವೆ. ಓರ್ವ ವ್ಯಕ್ತಿ ತಮ್ಮ ಜೀವಿತಾವಧಿಯಲ್ಲಿ ಮಾಡಿದ ದಾನದ ಫಲವನ್ನು ತನ್ನ ಮರಣಾನಂತರ ಕೂಡಾ ಪಡೆದುಕೊಳ್ಳುತ್ತಾನೆಂದು ಹೇಳಲಾಗಿದೆ.

ಈ ಕೆಲಸಕ್ಕೆ ಮುಂದಾದ ಸುನೀಲ ವೆರ್ಣೆಕರ್ ಅವರ ಕಾರ್ಯ ಅತ್ಯಂತ ಶ್ಲಾಘನೀಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಾ.ಶಿ. ಇಲಾಖೆ ಉಪನಿರ್ದೇಶಕ ಎಂ.ಎ. ರಡ್ಡೇರ್, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ, ಶಾಲಾ ಮುಖ್ಯೋಪಾಧ್ಯಾಯೆ ಪಾರ್ವತಿ ವಸ್ತ್ರದ, ಎಸ್.ಆರ್. ಹನಮಗೌಡ್ರ, ಎಂ.ಪಿ. ಸಾಂಬ್ರಾಣಿ, ಎಸ್.ಬಿ. ಗುಳೇದವರ, ಎಸ್.ಎಂ. ಪತ್ತಾರ, ಎಸ್.ಎ. ಬಾಣದ, ಎಸ್.ಎ. ಗದ್ದನಕೇರಿ, ಎನ್.ಆರ್. ಶಿರೋಳ, ಎಸ್.ಯು. ಕುಷ್ಟಗಿ, ಜಿ.ಎನ್. ಅಳವಂಡಿ, ಪಿ.ವ್ಹಿ. ದಾಸರ, ಎಲ್.ಎಸ್. ಮಾಳೊತ್ತರ, ಎಸ್.ಎಸ್. ಗಾಳಿ, ಎಮ್.ಆಯ್. ಶಿವನಗೌಡ್ರ ಮುಂತಾದವರು ಉಪಸ್ಥಿತರಿದ್ದರು.

ಸಂಜೀವಿನಿ ಜಿ. ಕುಲಗುಡಿ ಕಾರ್ಯಕ್ರಮ ನಿರೂಪಿಸಿದರು. ಜಯಲಕ್ಷ್ಮೀ ಬಿ.ಅಣ್ಣಿಗೇರಿ ವಂದಿಸಿದರು.

'ಅರಳು' ಶಾಲಾ ಕಾರ್ಯಕ್ರಮದಲ್ಲಿ ಸಾಧನ-ಸಲಕರಣೆ ವಿತರಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಈ ಮಕ್ಕಳು ಸ್ವಾವಲಂಬಿಗಳಾಗಿ ಬೆಳೆಯಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬುದ್ಧಿಮಾಂದ್ಯ ಮಕ್ಕಳು ತಂದೆ-ತಾಯಿ, ಸಮಾಜಕ್ಕೆ ಹೊರೆ ಎಂದು ತಾತ್ಸಾರ, ಕೀಳರಿಮೆ ತೋರದೇ ಅವರನ್ನು ದೇವರ ಮಕ್ಕಳೆಂದು ಪೂಜ್ಯ ಭಾವನೆಯಿಂದ ಕಾಣಬೇಕು. ಅವರಿಗೂ ಸ್ನೇಹ, ಪ್ರೀತಿ, ವಿಶ್ವಾಸ, ಕಾಳಜಿ ತೋರುವ ಮನಸ್ಥಿತಿ ಎಲ್ಲರದ್ದಾಗಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಪಟ್ಟಣದ ಸೋಮೇಶ್ವರ ನೂಲಿನ ಗಿರಣಿ ಕಟ್ಟಡದಲ್ಲಿ ನಡೆಯುತ್ತಿರುವ 'ಅರಳು' ವಿಶೇಷ ಅಗತ್ಯತೆಯುಳ್ಳ ಬುದ್ಧಿಮಾಂದ್ಯ ಶಾಲೆಯ ಮಕ್ಕಳಿಗೆ ಬೆಂಗಳೂರಿನ ಸೆಂಟ್ರಲ್ ಪೌಂಢೇಶನ್ ಮತ್ತು ರೈಸ್ ಬಯೋನಿಕ್ಸ್ ಸಂಸ್ಥೆಯವರು ಕೊಡಮಾಡಿದ ಸಾಧನ-ಸಲಕರಣೆ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.


ಸಮಾಜದಲ್ಲಿ ಎಲ್ಲ ಮಕ್ಕಳಂತೆ ಈ ಮಕ್ಕಳೂ ಸ್ವಾವಲಂಬಿಗಳಾಗಿ ಬೆಳೆಯಬೇಕು. ಅವರಿಗೂ ಸಮಾಜದಲ್ಲಿ ಪ್ರೀತಿ, ವಿಶ್ವಾಸ ಸಿಗಬೇಕು ಎಂಬ ಸದುದ್ದೇಶ, ಸತ್‌ಸಂಕಲ್ಪದಿಂದ ಸರ್ಕಾರದ ಅನುದಾನವಿಲ್ಲದೇ ಹಲವು ಸಂಕಷ್ಟಗಳ ನಡುವೆಯೂ ಇಂತಹ ಮಕ್ಕಳ ನಿಸ್ವಾರ್ಥ ಸೇವೆ ಮಾಡುತ್ತಿರುವ ಅರಳು ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ಪ್ರಾಸ್ತಾವಿಕವಾಗಿ ಸಂಸ್ಥೆಯ ಮುಖ್ಯೋಪಾಧ್ಯಾಯೆ ನೀಲಮ್ಮ ದಾಸಪ್ಪನವರ ಮಾತನಾಡಿ, ತಾಲೂಕಿನ 32 ಗ್ರಾಮಗಳ 64 ಬುದ್ಧಿಮಾಂದ್ಯ ಮಕ್ಕಳಿಗೆ ಸೆಂಟ್ರಲ್ ಫೌಂಡೇಶನ್ ಮತ್ತು ಬಯೋನಿಕ್ಸ್ ಸಂಸ್ಥೆಯವರು ಅಗತ್ಯ ಸಾಧನ-ಸಲಕರಣೆಗಳನ್ನು ಉಚಿತವಾಗಿ ನೀಡಿರುವುದು ಮಕ್ಕಳ ಸೇವೆಗೆ ಅನುಕೂಲವಾಗಿದೆ.

ಇಂತಹ ಮಕ್ಕಳ ಸೇವೆಯಲ್ಲಿ ಸಂತೃಪ್ತಿ ಕಾಣುವ ಶಿಕ್ಷಕ ಬಳಗ, ಪಾಲಕರ ಸಹಕಾರವೂ ಸಿಕ್ಕಿರುವುದರಿಂದ ಪ್ರಸ್ತುತ 35 ಮಕ್ಕಳಿಗೆ ದೈಹಿಕ, ಮಾನಸಿಕ, ಶೈಕ್ಷಣಿಕ, ಆರೋಗ್ಯ ಸೇವೆ ನೀಡಲು ಸಾಧ್ಯವಾಗಿದೆ. ಸರ್ಕಾರದ ಯಾವುದೇ ಅನುದಾನವಿಲ್ಲದೇ ಸ್ವಂತದ ಮತ್ತು ಸಂಘ-ಸಂಸ್ಥೆಗಳ ಸಹಾಯದಿಂದ ಮಾಡುತ್ತಿರುವ ಸೇವಾ ಕಾರ್ಯಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಮಾಜಿ ಶಾಸಕರಾದ ಜಿ.ಎಂ. ಮಹಾಂತೆಟ್ಟರ, ಜಿ.ಎಸ್. ಗಡ್ಡದೇವರಮಠ, ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಎಸ್.ಡಿ. ಹೊಸಮನಿ ಅಧ್ಯಕ್ಷತೆ ವಹಿಸಿದ್ದರು.

ರೈಸ್ ಬಯೋನಿಕ್ಸ್ ಸಂಸ್ಥೆಯ ನಿರ್ದೇಶಕ ಅರುಣ ಚೆರಿ, ಸುರೇಶ ಬ್ಯಾಡಗಿ, ಶಂಕ್ರಮ್ಮ ವ್ಯಾಗೇರಿ, ಪ್ರಕಾಶ ಉಪನಾಳ, ಫಕ್ಕಿರೇಶ ಮ್ಯಾಟಣ್ಣವರ, ನಾಗರಾಜ ವಾಲಿ, ಎಂ.ಜಿ. ದಾಸಪ್ಪನವರ, ಎಂ.ಕೆ. ಕಳ್ಳಿಮಠ ಸೇರಿದಂತೆ ಪಾಲಕರು, ಶಿಕ್ಷಕ-ಸಿಬ್ಬಂದಿಗಳು ಇದ್ದರು. ಪ್ರಕಾಶ ಗಾಣಿಗೇರ, ಅಕ್ಕಮ್ಮ ಕೋರದಾಳ ನಿರೂಪಿಸಿದರು.



ಸರ್ಕಾರದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕಮಿಟಿಯಲ್ಲಿರುವುದರಿಂದ ಈ ಶಾಲೆಗೆ ಸರ್ಕಾರದ ಸೌಲಭ್ಯ, ಸ್ವಂತ ಕಟ್ಟಡ ಕಲ್ಪಿಸುವುದು ಸೇರಿದಂತೆ ಈ ಮಕ್ಕಳ ಶ್ರೇಯೋಭಿವೃದ್ಧಿಗೆ ಶ್ರಮಿಸುವ ಪ್ರಾಮಾಣಿಕ ಕಾರ್ಯ ಮಾಡುತ್ತೇನೆ ಎಂದು ಶಾಸಕ ಡಾ. ಚಂದ್ರು ಲಮಾಣಿ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ವತಿಯಿಂದ ಮುಖ್ಯಮಂತ್ರಿಗಳಿಗೆ ಭವ್ಯ ಸ್ವಾಗತ

# ಸಿಎಂ ಸಿದ್ದರಾಮಯ್ಯ ಇಂದು ಗದುಗಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಿ. 17ರಂದು ಬೆಳಿಗ್ಗೆ 10.45ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೆಲಿಕಾಪ್ಟರ್ ಮೂಲಕ ಜಿಲ್ಲಾಡಳಿತ ಭವನದ ಹಿಂಭಾಗದಲ್ಲಿರುವ ಹೆಲಿಪ್ಯಾಡ್‌ನಲ್ಲಿ ಬಂದಿಳಿಯಲಿದ್ದಾರೆ. ಬಳಿಕ 11 ಗಂಟೆಗೆ ಸಂಭಾಪೂರ ರಸ್ತೆಯಲ್ಲಿರುವ ಜಿ.ಎಸ್. ಪಾಟೀಲ ಅವರ ಲೇಔಟಿನಲ್ಲಿ ನಿರ್ಮಾಣಗೊಂಡಿರುವ ಬಾಲಕಿಯರ ಸರ್ಕಾರಿ ಬಾಲಮಂದಿರದ ನೂತನ ಕಟ್ಟಡದ ಉದ್ಘಾಟನೆ ಮಾಡುವರು.

ಮುಖ್ಯಮಂತ್ರಿಗಳನ್ನು ಕಾಂಗ್ರೆಸ್ ಪಕ್ಷದ ವತಿಯಿಂದ ಸ್ವಾಗತಿಸಲಾಗುತ್ತಿದೆ. ನಂತರ ನಡೆಯುವ ಬಾಲಕಿಯರ ಸರ್ಕಾರಿ ಬಾಲಮಂದಿರದ ನೂತನ ಕಟ್ಟಡದ ಉದ್ಘಾಟನಾ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪಧಾದಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿ.ಪಂ, ತಾ.ಪಂ, ಗ್ರಾ.ಪಂ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು-ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಪಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು-ಸದಸ್ಯರು ಹಾಗೂ ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.



ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ರೋಣ ಶಾಸಕರು ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಎಸ್. ಪಾಟೀಲ ಸೇರಿದಂತೆ ವಿಧಾನಸಭೆ, ವಿಧಾನ ಪರಿಷತ್ ಸದಸ್ಯರು, ಸಂಸದರು, ನಗರಸಭೆ ಸದಸ್ಯರು ಉಪಸ್ಥಿತರಿರುವರು.

## ಶುದ್ಧ ನೀರು ಪೂರೈಕೆಯಾಗಲಿ: ರಾಘವೇಂದ್ರ ಪಾಲನಕರ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ-ಬೆಟಗೇರಿ ನಗರಸಭೆಯ ಅಧಿಕಾರಿಗಳು ನಗರಸಭೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಬಾಕಿ ಕರ ವಸೂಲಿ ಪ್ರಕ್ರಿಯೆಯನ್ನು ತುಂಬಾ ಉತ್ಸಾಹದೊಂದಿಗೆ ಚುರುಕುಗೊಳಿಸಿದ್ದಾರೆ. ಆದರೆ ಅವಳಿ ನಗರದ ಹಲವೆಡೆ ಮಲಮೂತ್ರ ಮಿಶ್ರಿತ, ಕಲುಷಿತ ಚರಂಡಿ ನೀರು ಪೂರೈಸಿದ ಕೀರ್ತಿಯೂ ನಗರಸಭೆಗೆ ಸಲ್ಲುತ್ತದೆ ಎಂದು ನ್ಯಾಯವಾದಿ, ಸಾಮಾಜಿಕ ಹೋರಾಟಗಾರ ರಾಘವೇಂದ್ರ ಪಾಲನಕರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅವಳಿ ನಗರದ ವಿವಿಧ ವಾರ್ಡ್‌ಗಳಲ್ಲಿ ಅಪಾಯಕಾರಿಯಾದ ಫಿಕಲ್ ಕೋಲಿಫಾರಮ್ ಎಂಬ ವಿಷಕಾರಕ ಅಂಶಗಳಿಂದ ಕೂಡಿದ ನೀರು ಪೂರೈಕೆಯಾಗಿತ್ತು. ಈ ಬಗ್ಗೆ ನೀರಿನ ಪರೀಕ್ಷೆಗೊಳಪಡಿಸಿದ ವರದಿಯೂ ಲಭ್ಯವಿದೆ. ಇದಕ್ಕೆಲ್ಲ ಮೂಲ ಕಾರಣ ನಗರ ನೀರು ಸರಬರಾಜು ಮತ್ತು ಒಳಚರಂಡಿ ಇಲಾಖೆಯಿಂದ ಕೈಗೊಳ್ಳಲಾದ ಕಳಪೆ ಗುಣಮಟ್ಟದ, ಅವೈಜ್ಞಾನಿಕ ಒಳಚರಂಡಿ ಕಾಮಗಾರಿ. ಹೀಗಿರುವಾಗ ಕುಡಿಯುವ ನೀರಿನ ಕರ ಬಾಕಿದಾರರ ನಳಗಳಿಗೆ ನೀರು ಪೂರೈಕೆಯನ್ನು ತಡೆಹಿಡಿಯುವ ನಿಲುವು ಹಾಸ್ಯಾಸ್ಪದ ಸಂಗತಿಯಾಗಿದೆ ಎಂದಿದ್ದಾರೆ.

ಕುಡಿಯುವ ನೀರಿನ ಸರಬರಾಜಿನಲ್ಲಿ ಪರಿಶುದ್ಧತೆಯನ್ನು ಕಾಪಾಡಲು ಜಿಲ್ಲಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾ ಆರೋಗ್ಯಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳ ಮೇಲೆ ಕ್ರಮವನ್ನು ಕೈಗೊಳ್ಳಲು ಮುಂದಾಗಲಿ ಎಂದಿದ್ದಾರೆ.

ನೀರಾವರಿ ಯೋಜನೆಗಳ ಪರಿಕರ ವಿತರಣಾ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ


# ರೈತರ ಹಿತ ಕಾಯುವ ಕೆಲಸ ನಿರಂತರ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕ್ಷೇತ್ರದ ಮತದಾರರು ನನ್ನ ಮೇಲೆ ವಿಶ್ವಾಸವಿಟ್ಟು ಶಾಸಕನನ್ನಾಗಿ ಆಯ್ಕೆ ಮಾಡಿದ್ದಾರೆ. ಮತಕ್ಷೇತ್ರದ ರೈತರ ಬದುಕನ್ನು ಹಸನುಗೊಳಿಸುವುದಕ್ಕಾಗಿ ಇತ್ತೀಚೆಗೆ ನಡೆದ ವಿಧಾನಸಭೆ ಅಧಿವೇಶನದಲ್ಲಿ ಕ್ಷೇತ್ರಕ್ಕೆ ಅಗತ್ಯವಿರು ನೀರಾವರಿ ಯೋಜನೆಗಳ ಕಾಯಕಲ್ಪ ನೀಡುವುದಕ್ಕಾಗಿ ಅನುದಾನ ಒದಗಿಸುವಂತೆ ಸರಕಾರಕ್ಕೆ ಒತ್ತಾಯಿಸಲಾಗಿದೆ. ರೈತರ ಹಿತ ಕಾಯುವ ಕೆಲಸ ನಿರಂತರವಾಗಿ ನಡೆಯಲಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಶಿರಹಟ್ಟಿಯ ಕೃಷಿ ಇಲಾಖೆ ಕಚೇರಿಯಲ್ಲಿ ವಿಶ್ವ ಮಣ್ಣು ದಿನಾಚರಣೆ ಹಾಗೂ ಸೂಕ್ಷ್ಮ ನೀರಾವರಿ ಯೋಜನೆಗಳ ಪರಿಕರಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸತತ ಬರಗಾಲದಿಂದ ಸಂಕಷ್ಟದ ಸುಳಿಯಲ್ಲಿರುವ ರೈತರಿಗೆ ಶೀಘ್ರವೇ ಸರಕಾರ ಪರಿಹಾರವನ್ನು ನೀಡಬೇಕು. ಇತ್ತೀಚೆಗೆ ವಿಮಾ ಕಂಪನಿಯವರು ಮಧ್ಯಂತರ ಪರಿಹಾರ ನೀಡಿದ್ದಾರೆ. ರೈತರಿಗೆ ಸರಕಾರ ಕೊಡಮಾಡುವ ಪರಿಹಾರದ ಹಣವನ್ನು ಬ್ಯಾಂಕಿನವರು ಸಾಲಕ್ಕೆ ಜಮಾ ಮಾಡಿಕೊಂಡರೆ ನನ್ನ ಗಮನಕ್ಕೆ ತರಬೇಕು. ತಾಲೂಕಿನಲ್ಲಿ 800 ರೈತ ಫಲಾನುಭವಿಗಳಿಗೆ ಸ್ಪಿಂಕ್ಲರ್ ವಿತರಿಸಲಾಗುತ್ತಿದ್ದು, ಹಂತ ಹಂತವಾಗಿ ಉಳಿದವರಿಗೂ ಸಹ ನೀಡಲಾಗುವುದು ಎಂದರು.



ಗದಗ ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್. ಮಾತನಾಡಿ, ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ, ಗೊಬ್ಬರ, ಸ್ಪಿಂಕ್ಲರ್ ಸೇರಿದಂತೆ ಇತರ ಉಪಕರಣಗಳನ್ನು ನೀಡಲಾಗುತ್ತಿದೆ. ತಾಲೂಕಿನಲ್ಲಿ 800 ಸೆಟ್ ಸ್ಪಿಂಕ್ಲರ್ ವಿತರಣೆ ಮಾಡಲಾಗುತ್ತಿದೆ. ಬೋರ್‌ವೆಲ್ ಹಾಗೂ ಕೃಷಿ ಹೊಂಡ ನಿರ್ಮಿಸಿಕೊಂಡವರೂ ಸಹ ಅರ್ಜಿಯನ್ನು ಸಲ್ಲಿಸಬಹುದು ಎಂದರು.

ಎಡಿಎ ರೇವಣೆಪ್ಪ ಮನಗೂಳಿ, ಬಸವರಾಜ ನಾವಿ, ಫಕ್ಕೀರೇಶ ರಟ್ಟಿಹಳ್ಳಿ, ತಿಪ್ಪಣ್ಣ ಕೊಂಚಿಗೇರಿ, ಜಾನು ಲಮಾಣಿ, ಗೂಳಪ್ಪ ಕರಿಗಾರ, ನಂದಾ ಪಲ್ಲೇದ, ಚಂದ್ರಪ್ಪ ಹೊಸಮನಿ, ಅಕ್ಬರಸಾಬ ಯಾದಗಿರಿ, ರಮೇಶ ಕೊಳಿವಾಡ, ಎಸ್.ವೈ. ಲಂಗೋಟಿ, ಸಂಜೀವ ಹುಡೇದ, ಯಲ್ಲಪ್ಪ ಬಂಗಾರಿ ಮುಂತಾದವರು ಉಪಸ್ಥಿತರಿದ್ದರು.

ಇನ್ನೂ 1500 ಅರ್ಜಿಗಳು ಬಾಕಿ ಉಳಿದಿದ್ದು, ಇವುಗಳಿಗೆ ಅನುದಾನ ಬಿಡುಗಡೆ ಕುರಿತು ಶಾಸಕರ ಮನವಿ ಮೇರೆಗೆ ಕೇಂದ್ರ ಕಚೇರಿಗೆ ವರದಿ ನೀಡಲಾಗುವುದು. ಎಸ್‌ಸಿ/ಎಸ್‌ಟಿ ಫಲಾನುಭವಿಗಳು ನೇರವಾಗಿ ಅರ್ಜಿ ಸಲ್ಲಿಸಿ ಸರಕಾರದ ಸೌಲಭ್ಯ ಪಡೆಯಬಹುದಾಗಿದೆ. ರೈತರು ಇಲಾಖೆಯ ಸಹಾಯ ಸೌಲಭ್ಯಗಳನ್ನು ಸದುಪಯೋಗ 'ಪಡಿಸಿಕೊಳ್ಳಬೇಕೆಂದು ಸ್ಫೂರ್ತಿ ಜಿ.ಎಸ್. ಹೇಳಿದರು.

# ಉತ್ತಮ ಪತ್ರಕರ್ತರಾಗಿ ಹೊರಹೊಮ್ಮಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿಜಯಸಾಕ್ಷಿ ಸುದ್ದಿ, ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ 30 ವಿದ್ಯಾರ್ಥಿಗಳು ಕಲಿಕೆಯ ಭಾಗವಾಗಿ ಬೆಳಗಾವಿ ಸುವರ್ಣ ಸೌಧದಲ್ಲಿ ನಡೆದ ಕಲಾಪ ವೀಕ್ಷಣೆಗೆ ಹೋಗಿದ್ದ ಸಂದರ್ಭದಲ್ಲಿ ರಾಜ್ಯದ ಕಾನೂನು, ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅವರನ್ನು ಭೇಟಿ ಮಾಡಿದರು.

ಪತ್ರಿಕೋದ್ಯಮ ವಿದ್ಯಾರ್ಥಿ ಗಳನ್ನು ಕಂಡು ಸಂತಸ ವ್ಯಕ್ತಪಡಿಸಿದ ಸಚಿವರು, ಭಾವಿ ಪತ್ರಕರ್ತರು ಸದನದ ಕಲಾಪ ಕಾರ್ಯಚಟುವಟಿಕೆ ತಿಳಿದುಕೊಳ್ಳಿ ಮತ್ತು ಉತ್ತಮ ಪತ್ರಕರ್ತರಾಗಿ ಹೊರಹೊಮ್ಮಿ ಎಂದು ಹಾರೈಸಿದರು. ಇದೇ ಸಂದರ್ಭದಲ್ಲಿ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಪ್ರೊ. ಜೆ.ಎಂ. ಚಂದುನವರ ಸಚಿವರಿಗೆ ಹೂಗುಚ್ಛ ನೀಡಿ ಅಭಿನಂದಿಸಿದರು.

## ಡಿ.19 ರಂದು ನಗರಸಭೆ ಸಭಾಭವನದಲ್ಲಿ ಸಮಾಲೋಚನಾ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳಿಗೆ ಹಾಗೂ ಗಣ್ಯ ವ್ಯಕ್ತಿಗಳಿಗೆ ಹಾಗೂ ಅವಳಿ ನಗರದ ಹಿತೈಷಿಗಳಲ್ಲಿ ತಿಳಿಸುವುದೇನೆಂದರೆ ನಗರಸಭೆಯ 2024-25ನೇ ಸಾಲಿನ ಆಯವ್ಯಯ ತಯಾರಿಸಲು ಸರ್ಕಾರದ ಸುತ್ತೋಲೆ ಮಾರ್ಗಸೂಚಿಗಳ ಪ್ರಕಾರ ಸ್ಥಳೀಯ ಸಂಘ ಸಂಸ್ಥೆಗಳ, ಗಣ್ಯ ನಾಗರೀಕರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ವಾಣಿಜ್ಯೋದ್ಯಮ ನಿಗಮಗಳ ಸಮಾಲೋಚಿಸಿ ಸಲಹೆ ಸೂಚನೆಗಳನ್ನು ಪಡೆದು ಬಜೆಟ್ ಆಯವ್ಯಯ ತಯಾರಿಸಿ ಮಂಡಿಸಬೇಕಾಗಿರುತ್ತದೆ.

ಹೀಗಾಗಿ ಡಿಸೆಂಬರ್ 19ರಂದು ಬೆಳಿಗ್ಗೆ 11 ಗಂಟೆಗೆ ಗದಗ ಬೆಟಗೇರಿ ನಗರಸಭೆ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ನಗರಸಭೆಯ ಸಭಾಭವನದಲ್ಲಿ ಸಮಾಲೋಚನಾ ಸಭೆ ಕರೆಯಲಾಗಿದೆ.

ಅವಳಿ ನಗರದ ಸರ್ವತೋಮುಖ ಅಭಿವೃದ್ಧಿಗಾಗಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ಗದಗ ಬೆಟಗೇರಿ ನಗರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಡಿ.19ಕ್ಕೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110ಕೆ.ವ್ಹಿ. ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಡಿ.19ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110 ಕೆವ್ಹಿ ಬೆಳ್ಳಟ್ಟಿ ಉಪಕೇಂದ್ರಗಳಿಂದ ಪೂರೈಕೆಯಾಗುವ, 33 ಕೆವ್ಹಿ ಎವ್. ಎವ್.ಸಿ.ಎಲ್ ಗಾಳಿಯಂತ್ರ ಘಟಕ ಮತ್ತು 33 ಕೆವ್ಹಿ ಸೊಮೇಶ್ವರ ಸ್ಪಿನ್ನಿಂಗ ಮಿಲ್ಸ್, ಸೋಲಾರ್-1, ಸೋಲಾರ್-2 ಹಾಗೂ 110ಕೆ.ವ್ಹಿ. ಎನಾರಕಾನ, 110ಕೆ.ವ್ಹಿ. ಆದಿತ್ಯ ಬಿರ್ಲಾ ಸೋಲಾರ, 33ಕೆ.ವ್ಹಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33ಕೆ.ವ್ಹಿ. ಸೂರಣಗಿ ಉಪಕೇಂದ್ರ ಮತ್ತು 33ಕೆ.ವ್ಹಿ. ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸ್ಪಡುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಶ್ರೀ ಬೀರೇಶ್ವರ ಕಾರ್ತಿಕೋತ್ಸವ ಸಮಾರಂಭದಲ್ಲಿ ಡಾ. ಶಂಭು ಬಳಿಗಾರ

# ಯುವ ಸಮೂಹ ಉತ್ತಮ ಸಂಸ್ಕಾರ ಹೊಂದಲಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ನಮ್ಮ ಕಣ್ಣು ಮುಂದೆ ಎಲ್ಲಾ ಇರುತ್ತದೆ, ಆದರೆ ಆರಿಸಿಕೊಳ್ಳುವುದು ನಮ್ಮ ಕರ್ತವ್ಯ. ಕಬ್ಬಿನಿಂದ ಹಾಲನ್ನು ಕುಡಿಯುವುದು ಸಂಸ್ಕೃತಿ, ಅದೇ ಕಬ್ಬಿನ ರಸವನ್ನು ಹೆಂಡ ಮಾಡಿಕೊಂಡು ಕುಡಿಯುವುದು ವಿಕೃತಿಯಾಗಿದೆ. ಹೆಂಡ ಕುಡಿಯುವುದರಿಂದ ಮನೆಗಳಲ್ಲಿ ಕಲಹಗಳು ಪ್ರಾರಂಭವಾಗುತ್ತವೆ. ಆದ್ದರಿಂದ ಯುವಶಕ್ತಿಯು ಒಳ್ಳೆಯ ಸಂಸ್ಕಾರಗಳನ್ನು ಬೆಳೆಸಿಕೊಂಡು ಸನ್ಮಾರ್ಗದಲ್ಲಿ ಜೀವನ ಸಾಗಿಸಬೇಕೆಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಶಂಭು ಬಳಿಗಾರ ಹೇಳಿದರು.



ಅವರು ಶಿರಹಟ್ಟಿಯ ಶ್ರೀ ಬೀರೇಶ್ವರ ಸೇವಾ ಸಮಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ 18ನೇ ವರ್ಷದ ಡೊಳ್ಳಿನ ಪದಗಳ ತ್ರಿಕೋನ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯುವಕರು ಕೌಟುಂಬಿಕ ' ಸಂಬಂಧಗಳನ್ನು ಉಳಿಸಿ ಕೊಳ್ಳಬೇಕು. ಅತ್ತೆ ಮಾವ, ತಂದೆ-ತಾಯಿಯನ್ನು ಗೌರವಯುತವಾಗಿ ಕಾಣಬೇಕು. ಜನಪದ ಸಾಹಿತ್ಯದ ಜೊತೆಗೆ ಯುವಕರಿಗೆ ಮಾರ್ಗದರ್ಶನ ಮಾಡುವ ಕಾರ್ಯಕ್ರಮಗಳನ್ನೂ ಆಯೋಜಿಸ ಬೇಕೆಂದರು.

ಮಂಜುನಾಥ ಘಂಟಿ ಮಾತನಾಡಿ, ಜಾನಪದ ಲೋಕಕ್ಕೆ ಮೆರುಗು ತಂದುಕೊಟ್ಟು, ಕ್ಯಾಸೆಟ್‌ಗಳ ಮೂಲಕ ವಿಶೇಷ ಆಕರ್ಷಣೆ ಸೃಷ್ಟಿಸಿದ ಜಾನಪದ ಲೋಕದ ಧೃವತಾರೆಯಾಗಿರುವ ಡಾ. ಶಂಭು ಬಳಿಗಾರ ಅವರ ವಿಚಾರಧಾರೆಯನ್ನು ನಾವೆಲ್ಲರೂ ಅನುಸರಿಸಬೇಕು. ಕಳೆದ 18 ವರ್ಷಗಳಿಂದ ವಿವಿಧ ಕಲಾವಿದರನ್ನು ಕರೆಯಿಸಿ ಸಮಿತಿ ಅವರಿಗೆ ವೇದಿಕೆಯನ್ನು ನೀಡುತ್ತಾ ಬಂದಿದೆ ಎಂದರು.

ಗೂಳಪ್ಪ ಕರಿಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಕಾಶಪ್ಪ ಗೂಳಪ್ಪನವರ, ಭರಮಪ್ಪ ಪೂಜಾರ, ಕೆ.ಎ. ಬಳಿಗೇರ, ಪರಮೇಶ ಪರಬ, ಇಸಾಕ ಆದ್ರಳ್ಳಿ, ಹೊನ್ನಪ್ಪ ಶಿರಹಟ್ಟಿ, ಫಕ್ಕೀರೇಶ ರಟ್ಟಿಹಳ್ಳಿ, ಮುತ್ತುರಾಜ ಭಾವಿಮನಿ, ದೇವಪ್ಪ ಬಟ್ಟೂರ, ಹೊನ್ನೇಶ ಪಾಟಿ, ದೇವರಾಜ ಕಟ್ಟಿಮನಿ, ಅಶ್ರತಅಲಿ ಢಾಲಾಯತ, ಮುಸ್ತಾಕ ಚೋರಗಸ್ತಿ, ರಾಮಣ್ಣ ಕಂಬಳಿ, ಮಂಜು ಹಮ್ಮಿಗಿ, ಆನಂದ ಮಾಳೇಕೊಪ್ಪ ಮುಂತಾದವರು ಉಪಸ್ಥಿತರಿದ್ದರು.


ಕರ್ನಾಟಕ ಸರ್ಕಾರ

ಕಾರ್ಯನಿರ್ವಾಹಕ ಇಂಜಿನೀಯರ, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ವಿಭಾಗ ಗದಗ

ಕಾ.ಇ: ಗ್ರಾ.ಕು.ನೀ&ನೈ.ವಿ/ಗದಗ/ ಕಿ.ಇಂ/ಟೆಂಡರ್/2023-24/ 1015 ದಿನಾಂಕ: 14.12.2023

ಟೆಂಡರ ಪ್ರಕಟಣೆ

ಪಂಚಾಯತ ರಾಜ್ ಇಂಜಿನೀಯರಿಂಗ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರಿಂದ ಐಟಂ ದರದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ-2000 ಮತ್ತು ಇತ್ತೀಚಿನ ತಿದ್ದುಪಡಿಗಳಂತೆ, ಕುಡಿಯುವ ನೀರು ಸರಬರಾಜು ಯೋಜನೆ ಅಡಿಯಲ್ಲಿ ಗದಗ ಜಿಲ್ಲೆಯ ಈ ಕೆಳಗಿನ ಕಾಮಗಾರಿಯ ಟೆಂಡರನ್ನು "ಇ **ಪ್ರೊಕ್ಯುರಮೆಂಟ್**" ಮುಖಾಂತರ ಕರೆಯಲಾಗಿದೆ.

| ಕ್ರ. ಸಂ | ಇಂಡೆಂಟ್ ಸಂಖ್ಯೆ / ಕಾಮಗಾರಿಯ ಹೆಸರು | ಟೆಂಡರಗಿಟ್ಟ ಮೊತ್ತ | ಮುಂಗಡ ಠೇವಣಿ ಮೊತ್ತ |
|---|---|---|---|
| 1 | Supply diesel vehicle on hire basis with driver for a period for 1 year & Payment on monthly basis for 1 vehicle to RDWS&S Subdivision Nargund in Gadag dist. | 4.80 ಲಕ್ಷಗಳು | 12000.00 |
| 2 | Supply diesel vehicle on hire basis with driver for a period for 1 year & Payment on monthly basis for 1 vehicle to RDWS&S Subdivision Mundaragi Gadag dist. | 4.80 ಲಕ್ಷಗಳು | 12000.00 |

ಈ ಕಾಮಗಾರಿಗಳ ವಿವರಗಳಿಗಾಗಿ ಹಾಗೂ ಡೌನಲೋಡ ಮಾಡಿಕೊಳ್ಳಲು ಗುತ್ತಿಗೆದಾರರು ಕರ್ನಾಟಕ ಸರಕಾರದ "ಇ ಪ್ರೋಕ್ಯೂರಮೆಂಟ್ " ವೆಬ್ಸೈಟ್ https://kppp.karnataka.gov.in ನಲ್ಲಿ ನೋಡಿಕೊಳ್ಳಬಹುದು. ಟೆಂಡರ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ:18.12.2023, ಪ್ರಶ್ನೋತ್ತರದ ಕೊನೆಯ ದಿನಾಂಕ:27.12.2023.ಟೆಂಡರ ಸ್ವೀಕರೀಸುವ ಕೊನೆಯ ದಿನಾಂಕ:30.12.2023 ತಾಂತ್ರಿಕ & ಆರ್ಥಿಕ ಬಿಡ್ ತೆರೆಯುವ ದಿನಾಂಕ:1.1.2024

ವಾ.ಸಾ.ಇ./ಗದಗ/381/ದೇಶಪಾಂಡೆಪಬ್ಲಿಸಿಟಿ/2023-24.

ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಗದಗ.

## ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಪೂರ್ವಭಾವಿ ಸಭೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಸುಮಾರು 500 ವರ್ಷಗಳ ಹೋರಾಟ ಫಲವಾಗಿ ಪ್ರಭು ಶ್ರೀರಾಮಚಂದ್ರನ ಭವ್ಯ ದೇವಸ್ಥಾನ ಉದ್ಘಾಟನೆಗೊಳ್ಳಲಿದೆ.

ಈ ಕುರಿತು ಗದಗ ನಗರದಲ್ಲಿ ಪ್ರಭು ಶ್ರೀರಾಮಚಂದ್ರನನ್ನು ಮನೆ-ಮನದಲ್ಲಿ ನೆನೆಯುವ ವಿಶೇಷ ಕಾರ್ಯಕ್ರಮ ಆಯೋಜಿಸುವ ಪ್ರಯುಕ್ತ ಡಿ.17ರಂದು ಸಂಜೆ 5ಕ್ಕೆ ನಗರದ ಒಕ್ಕಲಗೇರಿ ಓಣಿಯ ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಶ್ರೀರಾಮನ ಭಕ್ತರು, ಹಿಂದೂ ಸಂಘಟನೆಗಳ ಪದಾಧಿಕಾರಿಗಳು, ಕಾರ್ಯಕರ್ತರು, ಹೋರಾಟಗಾರರು, ವಿವಿಧ ಸಮಾಜದ ಮುಂಖಡರು ಮತ್ತು ಸಾರ್ವಜನಿಕರು ಆಗಮಿಸಬೇಕಾಗಿ ಶ್ರೀರಾಮ ಸೇನಾ ಕರ್ನಾಟಕ ರಾಜ್ಯ ಕಾರ್ಯದರ್ಶಿ ರಾಜು ಖಾನಪ್ಪನವರ ಪತ್ರಿಕಾ ಪ್ರಕಟಣೆ ಮೂಲಕ ವಿನಂತಿದ್ದಾರೆ.

## 'ಶರಣ ಸಂಗಮ' ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಡಿ.17ರ ಬೆಳಿಗ್ಗೆ 11 ಕ್ಕೆ ನಡೆಯಲಿರುವ ಬಸವದಳದ 1572ನೇ ಶರಣ ಸಂಗಮದಲ್ಲಿ 'ಲಿಂಗಾಯತ ಧರ್ಮದ ಸಂಸ್ಕಾರಗಳು' ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣೆ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ಮಾಡುವರು. ಅತಿಥಿಗಳಾಗಿ ಶರಣ ಬಸವರಾಜ ವೆಂಕಟಾಪೂರ ಶರಣರು ಆಗಮಿಸುವರು. ಶರಣೆ ಜ್ಯೋತಿ, ಶರಣ ಮಂಜುನಾಥ ಅಸುಂಡಿ ಉಪಸ್ಥಿತರಿರುವರು.ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ದೇವದಾಸಿ ಮಹಿಳೆಯರ ಬೇಡಿಕೆ ಈಡೇರಿಕೆಗಾಗಿ ಡಿ.28ರಿಂದ 'ಬೆಂಗಳೂರು ಚಲೋ'

## ದೇವದಾಸಿ ಪದ್ಧತಿ ನಿರ್ಮೂಲನೆಗೆ ಕ್ರಮವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ದಲಿತರ ಅಭಿವೃದ್ಧಿಯ ಹೆಸರಿನಲ್ಲಿ ಪ್ರತಿ ವರ್ಷ ಸಾಕಷ್ಟು ಅನುದಾನ ವ್ಯಯವಾಗುತ್ತಿದೆ. ಅನೇಕ ಹೊಸ ಯೋಜನೆಗಳೂ ಜಾರಿಯಾಗುತ್ತವೆ. ಆದರೆ, ದೇವದಾಸಿ ಪದ್ಧತಿ, ಅದರ ಸೋಂಕು ಈಗಲೂ ಮುಂದುವರೆಯುತ್ತಿರುವುದಕ್ಕೆ ಮೇಲ್ಜಾತಿ ಹಾಗೂ ಮೇಲ್ವರ್ಗಗಳ ಪರವಾದ ರಾಜಕಾರಣವೇ ಕಾರಣವಾಗಿದೆ ಎಂದು ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘದ ರಾಜ್ಯ ಗೌರವಾಧ್ಯಕ್ಷ ಯು. ಬಸವರಾಜ ಆರೋಪಿಸಿದರು.



ನಗರಸಭೆಯ ಉದ್ಯಾನದ ಆವರಣದಲ್ಲಿ ಶನಿವಾರ ನಡೆದ ಜಿಲ್ಲಾ ಮಟ್ಟದ ಸಮಾವೇಶದಲ್ಲಿ ಮಾತನಾಡಿದ ಅವರು, ಸರಕಾರ ತಮ್ಮ ಹಳೆಯ ನಿಲುಮೆಯನ್ನು ಕೈಬಿಟ್ಟು, ಸಮಯ ಮಿತಿಯೊಳಗೆ ದೇವದಾಸಿ ಪದ್ಧತಿಯನ್ನು ಬೇರು ಸಮೇತ ನಿರ್ಮೂಲನೆ ಮಾಡಲು ಗಂಭೀರ ಕ್ರಮವಹಿಸಬೇಕು. ಸಾಮಾಜಿಕ ದೌರ್ಜನ್ಯದ ದೇವದಾಸಿ ಪದ್ಧತಿ ನಿಷೇಧ ಕಾಯ್ದೆಗೆ ತಿದ್ದುಪಡಿ ಮಾಡಬೇಕು. ಈಗಾಗಲೇ ದೇವದಾಸಿ ಮಹಿಳೆಯರ ಜೊತೆ ಸಂಸಾರ ನಡೆಸಿ, ಅವರ ಸಂತಾನಕ್ಕೆ ಕಾರಣರಾದವರಿಗೇ ಹೊಣೆಗಾರಿಕೆ ನಿಗದಿಪಡಿಸಬೇಕು. ಆಸ್ತಿಯಲ್ಲಿ ಮಕ್ಕಳಿಗೆ ಪಾಲು ದೊರೆಯುವಂತೆ ಕ್ರಮವಹಿಸಬೇಕು. ಈ ವಿಚಾರದ ದೂರುಗಳಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಮಾಳಮ್ಮ ಮಾತನಾಡಿ, ಕೃಷಿಯಲ್ಲಿ ತೊಡಗಲು ಬಯಸುವ ಎಲ್ಲ ಮಹಿಳೆಯರಿಗೆ ಮತ್ತು ದಲಿತ ಕುಟುಂಬಗಳಿಗೆ ಮುಂದಿನ ಹತ್ತು ವರ್ಷಗಳೊಳಗೆ ಪ್ರತಿ ಕುಟುಂಬಕ್ಕೆ ಕನಿಷ್ಠ ತಲಾ ಐದು ಎಕರೆ ನೀರಾವರಿ ಜಮೀನನ್ನು ಒದಗಿಸಲು ಯೋಜಿಸಬೇಕು. ಇದಕ್ಕಾಗಿ ಪ್ರತಿಯೊಂದು ಗ್ರಾಮದಲ್ಲಿ ಹೆಚ್ಚು ಭೂಮಿ ಹೊಂದಿರುವವರ ಜಮೀನುಗಳನ್ನು ಭೂ ಸ್ವಾಧೀನ ಮಾಡಬೇಕು. ಸ್ವಯಂ ಉದ್ಯೋಗದ ಸಾಲ ಸೌಲಭ್ಯ, ಸರಕಾರದ ಗ್ಯಾರಂಟಿಯೊಂದಿಗೆ ಐದು ವರ್ಷಗಳ ಬಡ್ಡಿರಹಿತ ಸಾಲ ಒದಗಿಸಬೇಕು.

> ಎಲ್ಲ ವಯೋಮಾನದ ದೇವದಾಸಿ ಮಹಿಳೆಯರ, ಕುಟುಂಬದ, ಪರಿತ್ಯಕ್ತ ಮಹಿಳೆಯರನ್ನು ಪ್ರತ್ಯೇಕವಾಗಿ ಗಣತಿ ಮಾಡಿ ಪುನರ್ವಸತಿಗೆ ಕ್ರಮವಹಿಸಬೇಕು. ಮಾಸಿಕ ತಲಾ 5 ಸಾವಿರ ರೂ. ಸಹಾಯಧನ ಒದಗಿಸಬೇಕು. ಈ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಡಿ.28ರಿಂದ 30ರವರೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ನಡೆಸಲಾಗುವದು ಎಂದು ಯು. ಬಸವರಾಜ ತಿಳಿಸಿದರು.

ದೇವದಾಸಿ ಮಹಿಳೆಯರ ಮಕ್ಕಳ ವಿವಾಹಕ್ಕೆ ತಲಾ 3 ಲಕ್ಷ ರೂ ಸಹಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ನ್ಯಾಯವಾದಿ ಬಾಲು ರಾಠೋಡ್, ಪದಾಧಿಕಾರಿಗಳಾದ ದೇವಮ್ಮ ಜೋಗಣ್ಣವರ, ಹುಲಿಗೆಮ್ಮ, ಫಕ್ಕೀರಮ್ಮ ಪೂಜಾರ, ಮೈಲಾರಪ್ಪ ಮಾದರ, ಪರಶುರಾಮ ಮಾದರ, ಮರಿಯಮ್ಮ ಹುಲಕೋಟಿ, ಭೀಮವ್ವ ನರಗುಂದ, ಮಲ್ಲಿಕಾರ್ಜುನ ಮಾದರ ಮುಂತಾದವರು ವೇದಿಕೆಯಲ್ಲಿದ್ದರು.

## ಹೊರಟ್ಟಿ ಕರ್ನಾಟಕ ಪಬ್ಲಿಕ್ ಶಾಲೆಗೆ ಸಚಿವ ಮಧು ಬಂಗಾರಪ್ಪ ಭೇಟಿ



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ದೇಶದಲ್ಲಿಯೇ ಮಾದರಿಯಾದ ಹೈಟೆಕ್ ಶಾಲೆಯನ್ನು ನಿರ್ಮಿಸುವ ಮೂಲಕ ಸಭಾಪತಿ ಬಸವರಾಜ್ ಹೊರಟ್ಟಿ ಹುಟ್ಟೂರಿನ ಋಣ ತೀರಿಸಿದ್ದಾರೆ. ತವರೂರಾದ ಮುಧೋಳ ತಾಲೂಕಿನ ಯಡಹಳ್ಳಿಯಲ್ಲಿ ಅಕ್ಷರ ದಾಸೋಹ ಸೇವೆಯನ್ನು ಮಾಡುವ ಮೂಲಕ ಅಪರೂಪದ ನಾಯಕನಾಗಿ ಜನರ ಮಧ್ಯೆ ಇರುವುದು ತಿಳಿದ ಸಂಗತಿ.

ಇಂತಹ ಅಪರೂಪದ ವೈಶಿಷ್ಟತೆ ಹೊಂದಿದ ಶಾಲೆಯನ್ನು ವೀಕ್ಷಿಸಲು ಇತ್ತೀಚೆಗೆ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ವಿಧಾನ ಪರಿಷತ್ ಸದಸ್ಯರೊಂದಿಗೆ ಆಗಮಿಸಿದ್ದರು. ಶಾಲೆಯನ್ನು ನೋಡಿ ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ, ನಮ್ಮಂತ ಯುವಕರಿಗೆ ಬಸವರಾಜ್ ಹೊರಟ್ಟಿ ಮಾದರಿಯಾಗಿದ್ದಾರೆ ಎಂದು ಅಭಿನಂದಿಸಿದರು.

ಶ್ರೀ ಶಿವಲಿಂಗಪ್ಪ ಬಸಪ್ಪ ಹೊರಟ್ಟಿ ಕರ್ನಾಟಕ ಪಬ್ಲಿಕ್ ಶಾಲೆಯನ್ನು ಸಂಪೂರ್ಣ ವೀಕ್ಷಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಸಚಿವರು, ಶಾಲೆಗೆ ಶಿಕ್ಷಣ ಇಲಾಖೆಯ ವತಿಯಿಂದ ಎಲ್ಲ ರೀತಿಯ ನೆರವನ್ನು ನೀಡುವುದಾಗಿ ಭರವಸೆ ನೀಡಿದರು. ವಯಕ್ತಿಕವಾಗಿ 5 ಲಕ್ಷ ರೂ.ಗಳ ದೇಣಿಗೆ ನೀಡಿದರು.

### ಹದಗೆಟ್ಟ ಕಾನೂನು ಸುವ್ಯವಸ್ಥೆ । ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ

## ಭ್ರಷ್ಟಾಚಾರದಲ್ಲಿ ಮುಳುಗಿದ ಕಾಂಗ್ರೆಸ್ ಸರ್ಕಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ವತಿಯಿಂದ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದೆಗೆಟ್ಟಿದೆಯೆಂದು ಆರೋಪಿಸಿ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭನೆ ನಡೆಸಿದರು.



ರಾಜ್ಯದಲ್ಲಿ ಭ್ರೂಣ ಹತ್ಯೆಯ ಜಾಲದ ಕೃತ್ಯಗಳು ಗೊತ್ತಿದ್ದರೂ ಸರ್ಕಾರ ಮಾತ್ರ ಯಾವುದೇ ಕ್ರಮ ಕೈಗೊಳ್ಳದೇ ಭ್ರಷ್ಟಾಚಾರದಲ್ಲಿ ಮುಳುಗಿದೆ. ಬೆಳಗಾವಿಯ ವಂಟಿಮೂರಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಮಹಿಳೆಯನ್ನು ಬೆತ್ತಲೆಗೊಳಿಸಿ ಕಂಬಕ್ಕೆ ಕಟ್ಟಿ ಹಾಕಿ ಥಳಿಸಿರುವ ಘಟನೆ ದೇಶಾದ್ಯಂತ ಚರ್ಚೆಗೆ ಕಾರಣವಾಗಿದೆ. ಸಂತ್ರಸ್ತೆಯನ್ನು ಮುಖ್ಯಮಂತ್ರಿ ಸಿದ್ರಾಮಯ್ಯನವರು ಭೇಟಿ ಮಾಡಿ ಸಾಂತ್ವನ ಹೇಳಿಲ್ಲ. ಸರಕಾರ ದಲಿತರ ಕುರಿತು ಮೊಸಳೆ ಕಣ್ಣೀರು ಹಾಕುತ್ತಿದೆ. ರಾಜ್ಯದ ಆಡಳಿತ ಯಂತ್ರವೇ ಬೆಳಗಾವಿಗೆ ಆಗಮಿಸಿದಾಗ ಇಲ್ಲಿ ಇಂಥ ಘಟನೆ ನಡೆದಿರುವುದು ಕಾನೂನು ಸುವ್ಯವಸ್ಥೆಯನ್ನೇ ಪ್ರಶ್ನಿಸುವಂತಾಗಿದೆ ಎಂದು ಕಾರ್ಯಕರ್ತರು ಆರೋಪಿಸಿದರು.

ಪ್ರತಿಭಟನೆಯ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ಮುತ್ತಣ್ಣ ಲಿಂಗನಗೌಡ್ರ, ಪ್ರಮುಖರಾದ ಎಂ.ಎಸ್. ಕರಿಗೌಡ್ರ, ಕಾಂತೀಲಾಲ ಬನ್ಸಾಲಿ, ಜಗನ್ನಾಥಸಾ ಭಾಂಡಗೆ, ರಾಜು ಕುರಡಗಿ, ಮಾಧವ ಗಣಾಚಾರಿ, ಸಿದ್ರಾಮಪ್ಪ ಮೊರಬದ, ಮಂಜುನಾಥ ಮೆಣಸಗಿ, ಬಿ.ಎಚ್. ಲದ್ವಾ, ಅನಿಲ ಅಬ್ಬಿಗೇರಿ, ನಾಗರಾಜ ಕುಲಕರ್ಣಿ, ಅಶೋಕ ಸಂಕಣ್ಣವರ, ಎಂ.ಎಂ. ಹಿರೇಮಠ, ಡಾ. ಶೇಖರ ಸಜ್ಜನರ, ಶಿವು ಹಿರೇಮನಿಪಾಟೀಲ, ಭದ್ರೇಶ ಕುಸ್ಲಾಪೂರ, ಸಿದ್ದು ಪಲ್ಲೇದ, ಭಗನ ರಾಜಪುರೋಹಿತ, ಮಾಂತೇಶ ನಲವಡಿ, ಪ್ರಕಾಶ ಅಂಗಡಿ, ಅಶೋಕ ಕುಡತಿನಿ, ಬೂದಪ್ಪ ಹಳ್ಳಿ, ಇರ್ಷಾದ ಮಾನ್ವಿ, ಮುತ್ತಪ್ಪ ಮೂಲಿಮನಿ, ವಿನಾಯಕ ಮಾನ್ವಿ, ಹನಮಂತಪ್ಪ ದಿಂಡೆಣ್ಣವರ, ಮಾಧುಸಾ ಮೇರವಾಡೆ, ರಮೇಶ ಸಜ್ಜಗಾರ, ಶಂಕರ ಕರಬಿಷ್ಠಿ, ಮಂಜುನಾಥ ಶಾತಗೇರಿ, ಚಂದ್ರು ತಡಸದ, ಮಂಜು ಮುಳಗುಂದ, ಸುರೇಶ ಚಿತ್ತರಗಿ, ಉಷಾ ದಾಸರ, ಸುನಂದಾ ಬಾಕಳೆ, ಜಯಶ್ರೀ ಉಗಲಾಟದ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಕಮಲಾಕ್ಷೀ ಗೊಂದಿ, ರೇಖಾ ಬಂಗಾರಶೆಟ್ಟರ, ಅಕ್ಕಮ್ಮ ವಸ್ತ್ರದ, ಶಾರದಾ ಸಜ್ಜನರ, ಪಾರ್ವತಿ ಪಟ್ಟಣಶೆಟ್ಟಿ, ಸ್ವಾತಿ ಅಕ್ಕಿ, ಶಂಕರ ಕಾಕಿ, ರಾಚಯ್ಯ ಹೊಸಮಠ, ಅಪ್ಪಣ್ಣ ಟೆಂಗಿನಕಾಯಿ, ಮಹಾದೇವಪ್ಪ ಚಿಂಚಲಿ, ಸಿದ್ರಾಮೇಶ ಹಿರೇಮಠ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.




VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka